**All India Radio: Bangalore**
**National Bulletin In Kannada**
**22.04.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**22.04.2026 1.10 p.m.**

**<><><><>**

ಮುಖ್ಯಾಂಶಗಳು

1. ಬೆಂಗಳೂರು ಜೈಲಿನಲ್ಲಿ ಭಯೋತ್ಪಾದನೆ ಚಟುವಟಿಕೆ ಪ್ರಕರಣ; ಏಳು ಅಪರಾಧಿಗಳಿಗೆ ತಲಾ ಏಳು ವರ್ಷಗಳ ಕಠಿಣ ಜೈಲು ಶಿಕ್ಷೆ
2. ೨೦೨೭ರ ಜನಗಣತಿ; ಇದುವರೆಗೆ ೨೬ ಲಕ್ಷ ಕುಟುಂಬಗಳಿಂದ ಸ್ವಯಂ ಗಣತಿ
3. ಅಮೆರಿಕದಲ್ಲಿ ನಾಳೆ ಲೆಬನಾನ್-ಇಸ್ರೇಲ್ ನಡುವೆ ಎರಡನೇ ಸುತ್ತಿನ ಶಾಂತಿ ಮಾತುಕತೆ
4. ಐಪಿಎಲ್ ಟಿ-೨೦ ಕ್ರಿಕೆಟ್; ಇಂದಿನ ಪಂದ್ಯದಲ್ಲಿ ಲಖ್ನೋ ಸೂಪರ್ ಜೈಂಟ್ಸ್ ಮತ್ತು ರಾಜಸ್ಥಾನ ರಾಯಲ್ಸ್ ತಂಡಗಳ ಸೆಣಸಾಟ

<><><><>

೨೦೨೩ ರ ಬೆಂಗಳೂರು ಜೈಲಿನಲ್ಲಿ ಭಯೋತ್ಪಾದನೆ ಚಟುವಟಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ಸಂಸ್ಥೆಯ ವಿಶೇಷ ನ್ಯಾಯಾಲಯ, ಲಷ್ಕರ್-ಎ-ತೈಬಾ ಸಂಘಟನೆಯ ಸದಸ್ಯ ಟಿ.ನಸೀರ್ ಸೇರಿದಂತೆ ಒಟ್ಟು ಏಳು ಅಪರಾಧಿಗಳಿಗೆ ತಲಾ ಏಳು ವರ್ಷಗಳ ಕಠಿಣ ಜೈಲು ಶಿಕ್ಷೆ ಮತ್ತು ತಲಾ ೪೮ ಸಾವಿರ ರೂಪಾಯಿ ದಂಡ ವಿಧಿಸಿದೆ. ನಸೀರ್ ಸೇರಿದಂತೆ ಸೈಯದ್ ಸುಹೈಲ್ ಖಾನ್, ಮೊಹಮ್ಮದ್ ಉಮರ್, ಜಾಹಿದ್ ತಬ್ರೇಜ್, ಸೈಯದ್ ಮುದಾಸೀರ್ ಪಾಷಾ, ಮೊಹಮ್ಮದ್ ಫೈಸಲ್ ರಬ್ಬಾನಿ ಮತ್ತು ಸಲ್ಮಾನ್ ಖಾನ್‌ಗೆ ಕಾನೂನುಬಾಹಿರ ಚಟುವಟಿಕೆಗಳ ತಡೆಗಟ್ಟುವಿಕೆ ಕಾಯ್ದೆ, ಶಸ್ತ್ರಾಸ್ತ್ರ ಕಾಯ್ದೆ ಮತ್ತು ಸ್ಫೋಟಕ ವಸ್ತುಗಳ ಕಾಯ್ದೆಯ ಅಡಿಯಲ್ಲಿ ಶಿಕ್ಷೆ ವಿಧಿಸಲಾಗಿದೆ. ನಸೀರ್, ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದೊಳಗೆ ಇದ್ದುಕೊಂಡು, ಭಯೋತ್ಪಾದನಾ ಕೃತ್ಯಕ್ಕೆ ಸಂಚು ರೂಪಿಸಿದ್ದ. ಅಲ್ಲಿಂದಲೇ ಭಯೋತ್ಪಾದನಾ ಕೃತ್ಯಗಳಿಗೆ ಯುವಕರನ್ನು ಗುರುತಿಸುವುದು, ನೇಮಕಾತಿ, ತರಬೇತಿ ಮತ್ತು ಮತಾಂತರ ಈ ಪಿತೂರಿಯಲ್ಲಿ ಒಳಗೊಂಡಿತ್ತು. ಮೊದಲಿಗೆ ೨೦೨೩ರ ಜುಲೈನಲ್ಲಿ ಬೆಂಗಳೂರು ಕೇಂದ್ರ ಅಪರಾಧ ದಳ-ಸಿಸಿಬಿ ಪೊಲೀಸರು, ಅಪರಾಧಿಗಳಿಂದ ಶಸ್ತ್ರಾಸ್ತ್ರಗಳು, ಮದ್ದುಗುಂಡುಗಳು ಮತ್ತು ಡಿಜಿಟಲ್

ಸಾಧನಗಳನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದರು. ನಂತರ ಈ ಪ್ರಕರಣವನ್ನು ಎನ್‌ಐಎ ವಹಿಸಿಕೊಂಡಿತು.

<><><>

ಮಹಾನ್ ದಾರ್ಶನಿಕರಾದ ಬಸವಣ್ಣನವರು, ಸಾಮಾಜಿಕ ಭೇದ-ಭಾವಗಳನ್ನು ತೀವ್ರವಾಗಿ ವಿರೋಧಿಸಿ, ಸಮಸಮಾಜಕ್ಕೆ ಪ್ರಯತ್ನಿಸಿದರು ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ಕರ್ನಾಟಕದ ಬೀದರ್‌ನ ಭಾಲ್ಕಿಯಲ್ಲಿ ಚೆನ್ನಬಸವ ದೇವರ ಸಮಾಧಿ ಬಳಿ ನಡೆದ ಡಾ.ಬಸವಲಿಂಗ ಸ್ವಾಮೀಜಿ ಅವರ ೭೫ನೇ ವರ್ಷದ ಸಂಭ್ರಮಾಚರಣೆ ಉದ್ದೇಶಿಸಿ ಅವರು ಮಾತನಾಡಿದರು. ಕರುಣೆ ಮತ್ತು ಧರ್ಮದ ಆಧಾರದ ಮೇಲೆ ಸಮಾನತೆಯಲ್ಲಿ ಬೇರೂರಿರುವ ಸಮಾಜವನ್ನು ಸೃಷ್ಟಿಸುವ ಸಂತಶ್ರೇಷ್ಠ ಬಸವಣ್ಣನವರ ಸಾರ್ವತ್ರಿಕ ದೃಷ್ಟಿಕೋನವನ್ನು ಮುಂದುವರಿಸಲು ಎಲ್ಲರೂ ಸಂಕಲ್ಪ ಮಾಡಬೇಕು ಎಂದು ಕರೆ ನೀಡಿದರು. ಬಳಿಕ ಇಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು, ಕಲಬುರಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಹತ್ತನೇ ಘಟಿಕೋತ್ಸವದಲ್ಲಿ ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

<><><>

ದೇಶದಲ್ಲಿ ೨೦೨೭ರ ಜನಗಣತಿಯ ಮೊದಲ ಹಂತದಲ್ಲಿ ಇದುವರಿಗೆ ೨೮ ಲಕ್ಷಕ್ಕೂ ಹೆಚ್ಚು ಕುಟುಂಬಗಳು ಸ್ವಯಂ ಗಣತಿ ಸೌಲಭ್ಯವನ್ನು ಪಡೆದುಕೊಂಡಿವೆ. ಇದು ಜನಗಣತಿಯ ಡಿಜಿಟಲ್ ಉಪಕ್ರಮದಲ್ಲಿ ನಾಗರಿಕರ ಹೆಚ್ಚುತ್ತಿರುವ ಭಗವಹಿಸುವಿಕೆಯನ್ನು ಸೂಚಿಸುತ್ತದೆ ಎಂದು ಭಾರತದ ರಿಜಿಸ್ಟ್ರಾರ್ ಜನರಲ್ ತಿಳಿಸಿದ್ದಾರೆ. ಈ ಕುಟುಂಗಳು ತಮ್ಮ ವಿವರಗಳನ್ನು ಆನ್‌ಲೈನ್ ಮೂಲಕ ಒದಗಿಸಿವೆ. ಜನಗಣತಿಯ ಮೊದಲ ಹಂತವು ಈ ತಿಂಗಳು ೧ ರಂದು ಪ್ರಾರಂಭವಾಯಿತು. ಸ್ವಯಂಗಣತಿ ಸೌಲಭ್ಯವು ಪ್ರಸ್ತುತ ಉತ್ತರಾಖಂಡ, ಮಧ್ಯಪ್ರದೇಶ, ಆಂಧ್ರಪ್ರದೇಶ, ಅರುಣಾಚಲಪ್ರದೇಶ, ಛತ್ತೀಸ್‌ಗಢ, ಹರಿಯಾಣ ಮತ್ತು ಬಿಹಾರದಲ್ಲಿ ನಡೆಯುತ್ತಿದೆ.

<><><>

ಪಹಲ್ಗಾಮ್ ಭಯೋತ್ಪಾದಕ ದಾಳಿ ನಡೆದು ಇಂದಿಗೆ ಒಂದು ವರ್ಷ ಕಳೆದ ಹಿನ್ನೆಲೆಯಲ್ಲಿ ಭಾರತೀಯ ಸೇನೆಯು, ಭಯೋತ್ಪಾದನೆಯ ವಿರುದ್ಧ ಹೋರಾಡುವ ಸಂಕಲ್ಪವನ್ನು ದೃಢಪಡಿಸಿದೆ. ಕಳೆದ ವರ್ಷ ಏಪ್ರಿಲ್ ೨೨ ರಂದು, ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು

೨೬ ಮುಗ್ಧ ಪ್ರವಾಸಿಗರನ್ನು ಹತ್ಯೆ ಮಾಡಿದ್ದರು. ಈ ಹೇಯ ಕೃತ್ಯವು ರಾಷ್ಟ್ರವನ್ನು ಬೆಚ್ಚಿಬೀಳಿಸಿತು ಮತ್ತು ಪ್ರಪಂಚದಾದ್ಯಂತದ ಸರ್ಕಾರಗಳು ಮತ್ತು ನಾಯಕರಿಂದ ಖಂಡನೆಗೆ ಗುರಿಯಾಯಿತು. ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ, ಭಾರತೀಯ ಸಶಸ್ತ್ರ ಪಡೆಗಳು ಕಳೆದ ವರ್ಷ ಮೇ ೬ ಮತ್ತು ೭ ರ ಮಧ್ಯರಾತ್ರಿ ಆಪರೇಷನ್ ಸಿಂದೂರ್ ಪ್ರಾರಂಭಿಸಿದವು. ಪಹಲ್ಗಾಮ್‌ನಲ್ಲಿ ಕಳೆದ ವರ್ಷ ನಡೆದ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಗೌರವ ನಮನ ಸಲ್ಲಿಸಿದ್ದಾರೆ. ಭಾರತವು ಪಹಲ್ಗಾಮ್ ದಾಳಿಯಲ್ಲಿ ಮಡಿದ ಕುಟುಂಬಗಳೊಂದಿಗೆ ಒಗ್ಗಟ್ಟಿನಿಂದ ನಿಂತಿದೆ. ಇಂತಹ ಕ್ರೂರ ಕೃತ್ಯಗಳು ಶಾಂತಿ, ಏಕತೆ ಮತ್ತು ಮಾನವೀಯತೆಯ ಶಾಶ್ವತ ಮೌಲ್ಯಗಳನ್ನು ಎತ್ತಿಹಿಡಿಯುವ ದೇಶದ ಸಂಕಲ್ಪವನ್ನು ಎಂದಿಗೂ ಅಲುಗಾಡಿಸಲು ಸಾಧ್ಯವಿಲ್ಲ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ದೇಶವು ಯಾವುದೇ ರೀತಿಯ ಭಯೋತ್ಪಾದನೆಗೆ ಎಂದಿಗೂ ತಲೆಬಾಗುವುದಿಲ್ಲ ಮತ್ತು ಭಯೋತ್ಪಾದಕರ ಸಂಚುಗಳು ಎಂದಿಗೂ ಯಶಸ್ವಿಯಾಗುವುದಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಭಯೋತ್ಪಾದನೆ ಮಾನವೀಯತೆಯ ದೊಡ್ಡ ಶತ್ರು. ಭಯೋತ್ಪಾದನೆ ಮತ್ತು ಅದನ್ನು ಆಶ್ರಯಿಸುವವರ ವಿರುದ್ಧ ದೇಶವು ತನ್ನ ಶೂನ್ಯ-ಸಹಿಷ್ಣುತೆ ನೀತಿಯನ್ನು ಮುಂದುವರಿಸುತ್ತದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ.

<><><><>

ಪ್ರಜಾಪ್ರಭುತ್ವ ಮೌಲ್ಯಗಳ ಆಧಾರದ ಮೇಲೆ ಭಾರತ-ಜರ್ಮನಿ ನಡುವಿನ ಔಪಚಾರಿಕ ರಾಜತಾಂತ್ರಿಕ ಸಂಬಂಧಗಳು ೭೫ ವರ್ಷಗಳನ್ನು ಪೂರೈಸಿವೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಜರ್ಮನಿಯ ಬರ್ಲಿನ್‌ನಲ್ಲಿ ಭಾರತೀಯ ವಲಸಿಗರನ್ನುದ್ದೇಶಿಸಿ ಮಾತನಾಡಿದ ಸಚಿವರು, ಐರೋಪ್ಯ ಒಕ್ಕೂಟದಲ್ಲಿ ಜರ್ಮನಿಯು ಭಾರತದ ಅತಿದೊಡ್ಡ ವ್ಯಾಪಾರ ಪಾಲುದಾರನಾಗಿದ್ದು, ಭಾರತದಲ್ಲಿ ೨ ಸಾವಿರಕ್ಕೂ ಹೆಚ್ಚು ಜರ್ಮನ್ ಕಂಪನಿಗಳು ಸಕ್ರಿಯವಾಗಿವೆ ಎಂದು ತಿಳಿಸಿದರು. ಭಾರತ ಮತ್ತು ಜರ್ಮನಿ ನಡುವಿನ ಸಂಬಂಧಗಳು ಬಲಗೊಳ್ಳುತ್ತಿವೆ. ಉಭಯ ದೇಶಗಳು ರಾಜಕೀಯ ಮತ್ತು ಕಾರ್ಯತಂತ್ರದ ಸಂಬಂಧಗಳನ್ನು ಹಂಚಿಕೊಳ್ಳುವುದರ ಜೊತೆಗೆ

ಕಲೆ ಮತ್ತು ಸಂಸ್ಕೃತಿಯನ್ನು ಸಹ ಹಂಚಿಕೊಳ್ಳುತ್ತವೆ ಎಂದು ಹೇಳಿದರು. ಜರ್ಮನಿಯಲ್ಲಿ ೩ ಲಕ್ಷ ೭೦ ಸಾವಿರ ಭಾರತೀಯರು ವಾಸಿಸುತ್ತಿದ್ದು, ಅವರು ಜರ್ಮನಿಯ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿದ್ದಾರೆ ಎಂದರು. ಭಾರತದ ಆರ್ಥಿಕತೆ ಸುಮಾರು ಶೇಕಡ ೭ ರಷ್ಟು ಬೆಳವಣಿಗೆ ದರದಲ್ಲಿ ಮುಂದುವರಿಯುತ್ತಿದೆ. ಶಿಕ್ಷಣ, ಕೌಶಲ್ಯ, ಸಂಶೋಧನೆ ಮತ್ತು ನಾವೀನ್ಯತೆಯಲ್ಲಿ ದೇಶ ಮುಂಚೂಣಿಯಲ್ಲಿ ಮುನ್ನಡೆಯುತ್ತಿದೆ. ಭಾರತ, ವಿಶ್ವದ ಮೂರನೇ ಅತಿ ದೊಡ್ಡ ನವೋದ್ಯಮ ಮತ್ತು ಕೃತಕ ಬುದ್ಧಿಮತ್ತೆ ಪರಿಸರ ವ್ಯವಸ್ಥೆ ಹೊಂದಿದೆ ಎಂದು ಸಚಿವ ರಾಜನಾಥ್ ಸಿಂಗ್ ಹೇಳಿದರು.

<><><>

ತಮಿಳುನಾಡು ವಿಧಾನಸಭೆ ಚುನಾವಣೆ ಮತ್ತು ಪಶ್ಚಿಮ ಬಂಗಾಳದ ಮೊದಲ ಹಂತದ ಚುನಾವಣೆ ಹಿನ್ನೆಲೆಯಲ್ಲಿ ಇಂದು ಅಭ್ಯರ್ಥಿಗಳು ಮತ್ತು ನಾಯಕರು ಮನೆ-ಮನೆಗೆ ತೆರಳಿ ಪ್ರಚಾರದಲ್ಲಿ ತೊಡಗಿದ್ದಾರೆ. ತಮಿಳುನಾಡಿನ ಎಲ್ಲಾ ಕ್ಷೇತ್ರಗಳಿಗೆ ಒಂದೇ ಹಂತದಲ್ಲಿ ಹಾಗೂ ಪಶ್ಚಿಮ ಬಂಗಾಳದ ಮೊದಲ ಹಂತದ ಕ್ಷೇತ್ರಗಳಿಗೆ ನಾಳೆ ಮತದಾನ ನಡೆಯಲಿದೆ. ತಮಿಳುನಾಡಿನ ೨೩೪ ವಿಧಾನಸಭಾ ಕ್ಷೇತ್ರಗಳಿಗೆ ಒಂದೇ ಹಂತದಲ್ಲಿ ಮತದಾನ ನಡೆಯಲಿದ್ದು, ರಾಜ್ಯದಲ್ಲಿ ಒಟ್ಟು ಐದು ಕೋಟಿ ೭೩ ಲಕ್ಷ ೪೩ ಸಾವಿರಕ್ಕೂ ಹೆಚ್ಚು ಮತದಾರರಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ೧೬ ಜಿಲ್ಲೆಗಳನ್ನೊಳಗೊಂಡ ೧೫೨ ಕ್ಷೇತ್ರಗಳಿಗೆ ನಾಳೆ ಮೊದಲ ಹಂತದ ಮತದಾನ ನಡೆಯಲಿದೆ. ಈ ಹಂತದಲ್ಲಿ ೧ ಸಾವಿರದ ೪೭೮ ಅಭ್ಯರ್ಥಿಗಳು ಚುನಾವಣಾ ಕಣದಲ್ಲಿದ್ದಾರೆ. ಎರಡನೇ ಹಂತದ ಮತದಾನ ಇದೇ ೨೯ ರಂದು ನಡೆಯಲಿದೆ. ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭಾ ಚುನಾವಣೆಗಳ ಮತ ಎಣಿಕೆ ಪ್ರಕ್ರಿಯೆ ಮೇ ೪ ರಂದು ನಡೆಯಲಿದೆ.

<><><>

ಪ್ರಾದೇಶಿಕ ಉದ್ವಿಗ್ನತೆಗಳ ನಡುವೆ, ಅಮೆರಿಕದಲ್ಲಿ ನಾಳೆ ಲೆಬನಾನ್ ಮತ್ತು ಇಸ್ರೇಲ್ ನಡುವೆ ಎರಡನೇ ಸುತ್ತಿನ ಮಾತುಕತೆ ನಡೆಯಲಿದೆ. ಲೆಬನಾನ್ ಮತ್ತು ಇಸ್ರೇಲ್ ನಡುವೆ ಹತ್ತು ದಿನಗಳ ಕದನ ವಿರಾಮ ಜಾರಿಗೆ ಬಂದ ನಂತರ ನಡೆಯಲಿರುವ ಮೊದಲ ಮಾತುಕತೆ ಇದಾಗಿದೆ. ವಾಷಿಂಗ್ಟನ್‌ನಲ್ಲಿರುವ ಲೆಬನಾನ್‌ನ ರಾಯಭಾರಿ ನಾಡಾ ಹಮಾದೆ ಮತ್ತು ಇಸ್ರೇಲ್ ರಾಯಭಾರಿ ಯೆಚಿಯಲ್ ಲೀಟರ್ ಏಪ್ರಿಲ್ ೧೪ ರಂದು ನಡೆದ ಮೊದಲ ಸುತ್ತಿನ ಮಾತುಕತೆಗಳ ನೇತೃತ್ವ ವಹಿಸಿದ್ದರು. ಇದರಲ್ಲಿ ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಕೂಡ

ಭಾಗವಹಿಸಿದ್ದರು. ನಾಳೆಯ ಮಾತುಕತೆಯಲ್ಲೂ ಕೂಡ ಉಭಯ ದೇಶಗಳ ರಾಯಭಾರಿಗಳು ಪ್ರಾತಿನಿಧ್ಯ ವಹಿಸಲಿದ್ದಾರೆ.

<><><>

ಬ್ರಿಟನ್‌ಗೆ ಅಧಿಕೃತ ಭೇಟಿಯಲ್ಲಿರುವ ಭಾರತೀಯ ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್, ಬ್ರಿಟನ್ ವಾಯುಪಡೆಯ ಮುಖ್ಯಸ್ಥ ಏರ್‌ಚೀಫ್ ಮಾರ್ಷಲ್ ರಿಚರ್ಡ್ ನೈಟನ್ ಅವರೊಂದಿಗೆ ಸಂವಾದ ನಡೆಸಿದರು. ಸಭೆಯ ಸಮಯದಲ್ಲಿ ಶಾಂತಿಯುತ ಮತ್ತು ಸಮೃದ್ಧ ಇಂಡೋ-ಪೆಸಿಫಿಕ್ ಪ್ರದೇಶ ಹಾಗೂ ವೇಗವರ್ಧಿತ ತಾಂತ್ರಿಕ ರೂಪಾಂತರದ ಈ ಸಮಯದಲ್ಲಿ ಉದಯೋನ್ಮುಖ ಸೈಬರ್ ಬೆದರಿಕೆಗಳೂ ಸೇರಿದಂತೆ ಸಮಕಾಲಿನ ಸವಾಲುಗಳನ್ನು ಭಾರತ ಮತ್ತು ಬ್ರಿಟನ್ ಒಟ್ಟಾಗಿ ಎದುರಿಸುವ ತಮ್ಮ ಸಂಕಲ್ಪವನ್ನು ಪುನರುಚ್ಚರಿಸಲಾಯಿತು. ನಂತರ ಜನರಲ್ ಅನಿಲ್ ಚೌಹಾಣ್ ಅವರು, ರಾಯಲ್ ಕಾಲೇಜ್ ಆಫ್ ಡಿಫೆನ್ಸ್ ಸ್ಟಡೀಸ್‌ನ ಕಮಾಂಡೆಂಟ್ ಮತ್ತು ಅಧ್ಯಾಪಕರೊಂದಿಗೆ ಸಂವಾದ ನಡೆಸಿದರು.

<><><>

ಮಹಿಳಾ ಕ್ರಿಕೆಟ್‌ನಲ್ಲಿ, ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳ ನಡುವಿನ ಐದು ಪಂದ್ಯಗಳ ಸರಣಿಯ ಮೂರನೇ ಟಿ-೨೦ ಅಂತಾರಾಷ್ಟ್ರೀಯ ಪಂದ್ಯ ಇಂದು ಜೋಹಾನ್ಸ್‌ಬರ್ಗ್‌ನ ವಾಂಡರರ್ಸ್ ಕ್ರೀಡಾಂಗಣದಲ್ಲಿ ನಡೆಯಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೯ ಗಂಟೆ ೩೦ ನಿಮಿಷಕ್ಕೆ ಆರಂಭವಾಗಲಿದೆ. ದಕ್ಷಿಣ ಆಫ್ರಿಕಾ ಮಹಿಳಾ ತಂಡ, ಮೊದಲ ಎರಡು ಪಂದ್ಯಗಳಲ್ಲಿ ಜಯ ಸಾಧಿಸಿ ಸರಣಿಯಲ್ಲಿ ಮುನ್ನಡೆ ಸಾಧಿಸಿದೆ. ಭಾರತದ ಮಹಿಳಾ ತಂಡವು ಮೂರನೇ ಪಂದ್ಯದಲ್ಲಿ ಗೆಲುವು ಸಾಧಿಸಿ ಸರಣಿಯನ್ನು ಉಳಿಸಿಕೊಳ್ಳಲು ಪ್ರಯತ್ನಿಸಲಿದೆ.

<><><>

ಲಖ್ನೋದ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಏಕಾನ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಲಖ್ನೋ ಸೂಪರ್ ಜೈಂಟ್ಸ್ ಮತ್ತು ರಾಜಸ್ಥಾನ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಪ್ರಾರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>